# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 31 |
| ಸದಸ್ಯರ ಹೆಸರು | : | ಶ್ರೀ ಛಲವಾದಿ.ಟಿ.ನಾರಾಯಣಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 04-12-2023 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಸಚಿವರು |

****

| | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರಸ್ತುತ ರಾಜ್ಯದಲ್ಲಿ ಬರದಿಂದ ರೈತರು ಕಂಗೆಟ್ಟಿದ್ದು, ಅಳಿದುಳಿದ ನೀರಾವರಿ ಆಶ್ರಿತ ಬೆಳೆಗಳಿಗೆ ನೀರನ್ನು ಹಾಯಿಸಲು ವಿದ್ಯುತ್ ಕೊರತೆಯಿಂದ ಅವರ ಬೆಳೆಗಳಿಗೆ ನೀರನ್ನು ಹಾಯಿಸಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ರಾಜ್ಯದ ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಯಲ್ಲಿ ಪ್ರಸ್ತುತ ರೈತರ ಕೃಷಿ ಪಂಪ್ ಸೆಟ್ ಗಳಿಗೆ ಸರ್ಕಾರದ ಆದೇಶದಂತೆ ದಿನವಹಿ 7 ಗಂಟೆಗಳ ಕಾಲ 3 ಫೇಸ್ ವಿದ್ಯುತ್ ಸರಬರಾಜು ನೀಡಲಾಗುತ್ತಿದೆ. |
| ಆ) | ಬರಗಾಲದ ನಡುವೆ ಕೊಳವೆ ಬಾವಿಗಳನ್ನು ಆಧರಿಸಿ ಕೃಷಿ ಚಟುವಟಿಕೆಗಳನ್ನು ನಡೆಸಲು ಕೈಗೊಂಡಿರುವ ರೈತರಿಗೆ ಸರ್ಕಾರ ನಿರಂತರವಾಗಿ ವಿದ್ಯುತ್ ನೀಡಲು ವಿಫಲವಾಗುತ್ತಿರುವುದರಿಂದ ರೈತರಿಗೆ ತೊಂದರೆ ಮಾಡಿದಂತೆ ಆಗುವುದಿಲ್ಲವೇ; | ರೈತರ ಪಂಪ್‌ಸೆಟ್‌ಗಳಿಗೆ ಮೇಲೆ ನಮೂದಿಸಿದಂತೆ ದಿನಕ್ಕೆ 7 ಗಂಟೆಗಳ ಕಾಲ 3 ಫೇಸ್ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ. ರಾಜ್ಯದ ವಿವಿಧ ಭಾಗಗಳಲ್ಲಿನ ಬೇಡಿಕೆಗಳ ಹಿನ್ನಲೆಯಲ್ಲಿ ಭತ್ತ ಮತ್ತು ಕಬ್ಬು ಬೆಳೆಗಳ ಕಠಾವು ಪೂರ್ವ ಅವಧಿಯಲ್ಲಿ 7 ಗಂಟೆಗೂ ಹೆಚ್ಚಿನ ಅವಧಿಗೆ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ. ಕೆಲವು ಪ್ರದೇಶಗಳಲ್ಲಿ ಸ್ಥಳೀಯ ಅವಶ್ಯಕತೆಗೆ ತಕ್ಕಂತೆ ಹಗಲಿನಲ್ಲಿ 4 ಗಂಟೆಗಳು ಹಾಗೂ ರಾತ್ರಿ ವೇಳೆ 3 ಗಂಟೆಗಳು ಒಟ್ಟು 7 ಗಂಟೆಗಳ ಕಾಲ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ.<br>ಪ್ರಸಕ್ತ ವರ್ಷದ ಬರಗಾಲದ ಹಿನ್ನೆಲೆಯಲ್ಲಿ ಕೃಷಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಬಳಕೆ ಪ್ರಮಾಣ ಹಿಂದಿನ ವರ್ಷಕ್ಕಿಂತ (ಆಗಸ್ಟ 2023 ರಿಂದ ಅಕ್ಟೋಬರ್ 2023] ದ್ವಿಗುಣವಾಗಿರುತ್ತದೆ. |
| ಇ) | ಬರಗಾಲದ ಸಮಯದಲ್ಲಿ ರಾಜ್ಯದ ರೈತರಿಗೆ ನೀರಾವರಿ ಜಮೀನುಗಳಿಗೆ ವಿದ್ಯುತ್ ಪೂರೈಸುವಲ್ಲಿ ತಾರತಮ್ಯ ನೀತಿ ಮತ್ತು ಅವೈಜ್ಞಾನಿಕ ಲೋಡ್ ಶೆಡ್ಡಿಂಗ್ ಅನ್ನು ಅನುಸರಿಸಿ ರೈತರನ್ನು ಧೃತಿಗೆಡುವಂತೆ ಮಾಡುತ್ತಿದ್ದು, ಇವರನ್ನು ಸಾಲದ ಸಂಕಷ್ಟಕ್ಕೆ ಸಿಲುಕಿಸಿದಂತೆ ಆಗುವುದಿಲ್ಲವೇ? (ವಿವರ ನೀಡುವುದು) | ಈ ವರ್ಷ ಬರಗಾಲವಾಗಿರುವುದರಿಂದ, ಕೃಷಿ ಪಂಪ್‌ಸೆಟ್‌ಗಳ ವಿದ್ಯುತ್ ಬಳಕೆ ಪ್ರಮಾಣ ದ್ವಿಗುಣವಾಗಿರುವುದರಿಂದ, ಲಭ್ಯ ಸಂಪನ್ಮೂಲಗಳಿಂದ ವಿದ್ಯುತ್ತನ್ನು ಪಡೆದು ಸರಬರಾಜು ಮಾಡಲಾಗುತ್ತಿದೆ. ಕೆಲವು ಸಮಯಗಳಲ್ಲಿ ತಾಂತ್ರಿಕ ಕಾರಣಗಳಿಂದ ವಿದ್ಯುತ್ ಲಭ್ಯತೆ / ಉತ್ಪಾದನೆ ಕುಂಠಿತಗೊಂಡು ಸೀಮಿತ ಪ್ರಮಾಣದಲ್ಲಿ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ. |

ಸಂಖ್ಯೆ: ಎನರ್ಜಿ 273 ಇಬಿಎಸ್ 2023

**(ಕೆ.ಜೆ.ಜಾರ್ಜ್)**
**ಇಂಧನ ಸಚಿವರು**